ಓ ಹೃದಯಗಳನ್ನು ತಿರುಗಿಸುವವನೇ! ನನ್ನ ಹೃದಯವನ್ನು ನಿನ್ನ ಧರ್ಮದಲ್ಲಿ ದೃಢವಾಗಿ ನಿಲ್ಲಿಸು" ಎಂದು ಅಲ್ಲಾಹನ ಸಂದೇಶವಾಹಕರು (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಪದೇ ಪದೇ ಪ್ರಾರ್ಥಿಸುತ್ತಿದ್ದರು

ಅನಸ್ (ಅಲ್ಲಾಹು ಅವರ ಬಗ್ಗೆ ಸಂಪ್ರೀತನಾಗಲಿ) ರಿಂದ ವರದಿ: ಅವರು ಹೇಳಿದರು: "ಓ ಹೃದಯಗಳನ್ನು ತಿರುಗಿಸುವವನೇ! ನನ್ನ ಹೃದಯವನ್ನು ನಿನ್ನ ಧರ್ಮದಲ್ಲಿ ದೃಢವಾಗಿ ನಿಲ್ಲಿಸು" ಎಂದು ಅಲ್ಲಾಹನ ಸಂದೇಶವಾಹಕರು (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಪದೇ ಪದೇ ಪ್ರಾರ್ಥಿಸುತ್ತಿದ್ದರು. ನಾನು ಕೇಳಿದೆ: "ಓ ಅಲ್ಲಾಹನ ಸಂದೇಶವಾಹಕರೇ! ನಾವು ನಿಮ್ಮಲ್ಲಿ
ಮತ್ತು ನೀವು ತಂದ ಧರ್ಮದಲ್ಲಿ ವಿಶ್ವಾಸವಿಟ್ಟಿದ್ದೇವೆ. ಆದರೂ ನಿಮಗೆ ನಮ್ಮ ಬಗ್ಗೆ ಭಯವೇ?"
ಅವರು ಉತ್ತರಿಸಿದರು: "ಹೌದು, ನಿಶ್ಚಯವಾಗಿಯೂ ಹೃದಯಗಳು ಅಲ್ಲಾಹನ ಬೆರಳುಗಳ ಪೈಕಿ ಎರಡು ಬೆರಳುಗಳ ನಡುವೆ ಇವೆ. ಅವನು ಇಚ್ಛಿಸುವಂತೆ ಅವುಗಳನ್ನು ತಿರುಗಿಸುತ್ತಾನೆ."
[صحيح] [رواه الترمذي وأحمد]

ಧರ್ಮದಲ್ಲಿ ಮತ್ತು ಆಜ್ಞಾನುಸರಣೆ ಮಾಡುವುದರಲ್ಲಿ ಸ್ಥಿರವಾಗಿ ನಿಲ್ಲಿಸಲು ಮತ್ತು ವಕ್ರ ಮಾರ್ಗ ಹಾಗೂ ದುರ್ಮಾರ್ಗಗಳಿಂದ ದೂರವಿರಿಸಲು ಅಲ್ಲಾಹನಲ್ಲಿ ಬೇಡುವುದು ಪ್ರವಾದಿಯವರು (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಪದೇ ಪದೇ ನಿರ್ವಹಿಸುತ್ತಿದ್ದ ಒಂದು ಪ್ರಾರ್ಥನೆಯಾಗಿತ್ತು. ಪ್ರವಾದಿಯವರು (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಈ ಪ್ರಾರ್ಥನೆಯನ್ನು ಅತಿಯಾಗಿ ನಿರ್ವಹಿಸುವುದನ್ನು ನೋಡಿ ಅನಸ್ ಬಿನ್ ಮಾಲಿಕ್ (ಅಲ್ಲಾಹು ಅವರ ಬಗ್ಗೆ ಸಂಪ್ರೀತನಾಗಲಿ) ಆಶ್ಚರ್ಯಪಟ್ಟರು. ಆಗ ಪ್ರವಾದಿಯವರು (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಅವರಿಗೆ, "ನಿಶ್ಚಯವಾಗಿಯೂ ಹೃದಯಗಳು ಅಲ್ಲಾಹನ ಬೆರಳುಗಳ ಪೈಕಿ ಎರಡು ಬೆರಳುಗಳ ನಡುವೆಯಿವೆ, ಅವನು ಇಚ್ಛಿಸುವಂತೆ ಅವುಗಳನ್ನು ತಿರುಗಿಸುತ್ತಾನೆ" ಎಂದು ತಿಳಿಸಿದರು. ಹೃದಯವು ಸತ್ಯವಿಶ್ವಾಸ ಮತ್ತು ಸತ್ಯನಿಷೇಧವು ನೆಲೆಸುವ ಸ್ಥಳವಾಗಿದೆ. ಹೃದಯವು ಅತಿ ಹೆಚ್ಚಾಗಿ ತಿರುಗುವ ಕಾರಣ ಅದನ್ನು 'ಕಲ್ಬ್' (ತಿರುಗುವಂತದ್ದು) ಎಂದು ಕರೆಯಲಾಗಿದೆ. ಮಡಿಕೆಯಲ್ಲಿ ನೀರು ಕುದಿಯುವುದಕ್ಕಿಂತಲೂ ತೀವ್ರವಾಗಿ ಹೃದಯವು ತಿರುಗುತ್ತದೆ. ಅಲ್ಲಾಹು ಇಚ್ಛಿಸಿದವನ ಹೃದಯವನ್ನು ಅವನು ಸನ್ಮಾರ್ಗದಲ್ಲಿ ನಿಲ್ಲಿಸುತ್ತಾನೆ ಮತ್ತು ಧರ್ಮದಲ್ಲಿ ದೃಢಗೊಳಿಸುತ್ತಾನೆ. ಅಲ್ಲಾಹು ಇಚ್ಛಿಸಿದವನ ಹೃದಯವನ್ನು ಅವನು ಸನ್ಮಾರ್ಗದಿಂದ ವಕ್ರ ಮತ್ತು ದುರ್ಮಾರ್ಗಕ್ಕೆ ತಿರುಗಿಸುತ್ತಾನೆ.

http://www.sunnah.global/hadeeth/kn/show/3142